**ದಿನಾಂಕಃ 14.12.2022 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ.ಎ.ಜಿ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ವಿಚಾರಗಳನ್ನು ನಾನೇ ನನ್ನ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ ಎಂದು ತಿಳಿದು ಸಹಿ ಮಾಡಿರುತ್ತೇನೆ.

ದಿನಾಂಕ 12.12.2001 ರ ವಿಭಾಗ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-1 ಎಂದು, ಕೂಡ್ಲೂರು ಗ್ರಾಮದ ಸರ್ವೆ ನಂ. 168 ರ ಪಹಣಿ ಪತ್ರಿಕೆಯ ಗಣಕೀಕೃತ ನಕಲನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-2 ಎಂದು, ಕಂದಾಯ ರಶೀದಿಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-3 ಎಂದು, ತಿ. ನರಸೀಪುರ ಪೊಲೀಸರು ನೀಡಿದ ಹಿಂಬರಹವನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ವಾದಿ ಪರ ವಕೀಲರು ಕಾಲಾವಕಾಶ ಕೋರಿದ್ದರಿಂದ ಕಾಲಾವಕಾಶ ನೀಡಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ.,

ಹೆಚ್ಚುವರಿ ಸಿವಿಲ್ ಮತ್ತು ಜೆ ಎಮ್ ಎಫ್ ಸಿ
ನ್ಯಾಯಾಧೀಶರು, ತಿ.ನರಸಿಪುರ